ಕರ್ನಾಟಕ ಸರಕಾರ

**(ಶಾಲಾ ಶಿಕ್ಷಣ ಇಲಾಖೆ)**

**ಸಂಖ್ಯೆ: ಸಿ1(1)/ಆಡಳಿತ/ಶೀಜೇಪಟ್ಟಿ/34/2023-24**

ಆಯುಕ್ತರ ಕಛೇರಿ,
ಶಾಲಾ ಶಿಕ್ಷಣ ಇಲಾಖೆ,
ಐವಾನ-ಎ-ಶಾಹಿ ರಸ್ತೆ,
ಕಲಬುರಗಿ, ದಿನಾಂಕ: 20/01/2024

**ಅಧಿಸೂಚನೆ**

ವಿಷಯ: ದಿನಾಂಕ: 01/01/2024 ರಲ್ಲಿದ್ದಂತೆ, ಶಾಲಾ ಶಿಕ್ಷಣ ಇಲಾಖೆಯ ಶೀಘ್ರಲಿಪಿಗಾರರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ: ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿನಾಂಕ: 10/12/2021.

>><><><><<

ಉಲ್ಲೇಖಿತ ಸರ್ಕಾರದ ಅಧಿಕೃತ ಜ್ಞಾಪನದನ್ವಯ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957ರ ನಿಯಮ 10ರಡಿ ಜೇಷ್ಠತಾ ಪಟ್ಟಿಗಳನ್ನು ಸಿದ್ಧಪಡಿಸುವುದಕ್ಕೆ ಸಂಬಂಧಿಸಿದಂತೆ ಪರಿಷ್ಕೃತ ನಮೂನೆ ಅನುಬಂಧ-1 ಮತ್ತು ಅನುಬಂಧ-2ನ್ನು ಹೊರಡಿಸಲಾಗಿದ್ದು, ಇನ್ನು ಮುಂದೆ ಈ ಪರಿಷ್ಕೃತ ನಮೂನೆಗಳಲ್ಲಿ ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲು ತಿಳಿಸಲಾಗಿರುತ್ತದೆ.

ಅದರಂತೆ, ದಿನಾಂಕ: 01/01/2024 ರಲ್ಲಿದ್ದಂತೆ ಶಾಲಾ ಶಿಕ್ಷಣ ಇಲಾಖೆಯ ಶೀಘ್ರಲಿಪಿಗಾರರ ಪ್ರಾರಂಭದ ಮೂಲ ವೃಂದ, ಸ್ಥಳೀಯ ವೃಂದ ಹಾಗೂ ಉಳಿದ ಮೂಲ ವೃಂದದ ಪ್ರತ್ಯೇಕವಾದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಈ ಪತ್ರದೊಂದಿಗೆ ಲಗತ್ತಿಸಲಾದ ಪರಿಷ್ಕೃತ ಅನುಬಂಧಗಳಲ್ಲಿ ಇಲಾಖೆಯ ವೆಬ್‌ಸೈಟ್ www.cpikalaburgi.karnataka.gov.in ರಲ್ಲಿ ಪ್ರಕಟಿಸಲಾಗಿದೆ.

ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ, ಬಾಧಿತರಾಗಬಹುದಾದಂತಹ, ಸಿಬ್ಬಂದಿಗಳು ಈ ಅಧಿಸೂಚನೆಯನ್ನು ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ತಮ್ಮ ಆಕ್ಷೇಪಣೆಗಳಿದ್ದಲ್ಲಿ, ಅದನ್ನು ಸಮರ್ಥಿಸುವಂತಹ ಸೂಕ್ತ ದಾಖಲೆಗಳೊಂದಿಗೆ ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರ ಮುಖಾಂತರ ಈ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ಈ ನಿಗಧಿತ ಅವಧಿ ಮುಗಿದ ನಂತರ ಬಂದಂತಹ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**(ಡಾ: ಆಕಾಶ್.ಎಸ್,** ಭಾ.ಆ.ಸೇ,)
ಅಪರ ಆಯುಕ್ತರು

ಪ್ರತಿಗಳನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
3) ಪ್ರಾಂಶುಪಾಲರು, ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ, ಕಲಬುರಗಿ.
4) ಈ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಉಪ ನಿರ್ದೇಶಕರು (ಆಡಳಿತ).
5) ಈ ವಿಭಾಗದ ಎಲ್ಲಾ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಪ್ರಾಂಶುಪಾಲರುಗಳಿಗೆ.
6) ಈ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
7) ನೋಡಲ್ ಅಧಿಕಾರಿಗಳು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
8) ಕಛೇರಿ ಪ್ರತಿ.